153 ಪೇಜ್ ದಿ:72
31/1/100

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ಶಶೀಲ್ ಜಿ. ನಮೋಶಿ,
ಶ್ರೀ ಎಸ್.ವ್ಹಿ ಸಂಕನೂರ, ಶ್ರೀ ಎಸ್.ಎಲ್ ಭೋಜೇಗೌಡ ಹಾಗೂ ಶ್ರೀ ನಿರಾಣಿ ಹಣಮಂತ್
ರುದ್ರಪ್ಪ, ರವರುಗಳು ಗಮನ ಸೆಳೆಯುವ ಸೂಚನಾ ಪತ್ರಕ್ಕೆ ಉತ್ತರಿಸುವ ಕುರಿತು.

**ಪ್ರಶ್ನೆ**

ಶಿಕ್ಷಕರ ವರ್ಗಾವಣೆಯನ್ನು ಕೌನ್ಸಿಲಿಂಗ್ ಮುಖಾಂತರ ಕೈಗೊಳ್ಳಬೇಕೆಂಬ ನಿಯಮವಿದ್ದರೂ ನಿಯಮಗಳನ್ನು ಉಲ್ಲಂಘಿಸಿ ಪ್ರೌಢಶಾಲಾ ಮುಖ್ಯ ಶಿಕ್ಷಕರ ವರ್ಗಾವಣೆ ಹಾಗೂ ಪ್ರಾಥಮಿಕ ಶಾಲಾ ಶಿಕ್ಷಕರ ನಿಯೋಜನೆ ಮಾಡಿರುವ ಕುರಿತು ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರ ಗಮನ ಸೆಳೆಯುವುದು.

**ಉತ್ತರ**

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು-2020 ಹಾಗೂ ತಿದ್ದುಪಡಿಗಳನ್ನು ಒಳಗೊಂಡಂತೆ ಸರ್ಕಾರಿ ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕರು, ಪ್ರಾಥಮಿಕ ಶಾಲಾ ಸಹಶಿಕ್ಷಕರು ಹಾಗೂ ಪ್ರೌಢಶಾಲಾ ಮುಖ್ಯಶಿಕ್ಷಕರ ತತ್ಸಮಾನ ವೃಂದದ ವರ್ಗಾವಣೆ ಪ್ರಕ್ರಿಯೆಯನ್ನು ವರ್ಗಾವಣಾ ಕಾರ್ಯ್ಯೆಯನುಸಾರ ಕೌನ್ಸಿಲಿಂಗ್ ಮೂಲಕ ನಡೆಸಲಾಗುತ್ತಿದೆ. ಪ್ರೌಢಶಾಲಾ ಮುಖ್ಯ ಶಿಕ್ಷಕರ ತತ್ಸಮಾನ ವೃಂದದ ವರ್ಗಾವಣೆಗಳನ್ನು ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) ನಿಯಮಗಳು-2020 ಹಾಗೂ ತಿದ್ದುಪಡಿಗಳಲ್ಲಿ ಕೌನ್ಸಿಲಿಂಗ್‌ನ ಹೊರತಾದ ಹುದ್ದೆಗಳನ್ನು ಕಾಲ ಕಾಲಕ್ಕೆ ಹೊರಡಿಸಲಾದ ಸಾರ್ವತ್ರಿಕ ವರ್ಗಾವಣೆ ಮಾರ್ಗಸೂಚಿಗಳನ್ವಯ ಸರ್ಕಾರದ ಹಂತದಲ್ಲಿ ವರ್ಗಾವಣೆಯ ಪ್ರಕ್ರಿಯೆಗಳನ್ನು ನಿಯಮಾನುಸಾರ ಕೈಗೊಳ್ಳಲಾಗುತ್ತಿದೆ.

ಮುಂದುವರೆದು, ದೀರ್ಘಕಾಲಿನ ಅನಾರೋಗ್ಯ ವಯಸ್ಸಾದ / ಅನಾರೋಗ್ಯ ತಂದೆ-ತಾಯಿಗಳ ಪೋಷಣೆಯಂತಹ ಗಂಭೀರ ವೈಯಕ್ತಿಕ ಸಮಸ್ಯೆಗಳ ಕಾರಣಗಳಿಂದ ಶಿಕ್ಷಕರಿಂದ ಸಲ್ಲಿಕೆಯಾಗುವ ಮನವಿ ಹಾಗೂ ಶಿಫಾರಸ್ಸುಗಳನ್ನು ಆಧರಿಸಿ, ಮಾನವೀಯತೆಯ ನೆಲೆಗಟ್ಟಿನಲ್ಲಿ ಪರಿಗಣಿಸುವ ಮೂಲಕ ಸರ್ಕಾರಿ ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕರು, ಪ್ರಾಥಮಿಕ ಶಾಲಾ ಸಹಶಿಕ್ಷಕರ ಹಾಗೂ ಪ್ರೌಢಶಾಲಾ ಸಹ ಶಿಕ್ಷಕರ ನಿಯೋಜನೆಗಳನ್ನು ಆಯಾ ಶೈಕ್ಷಣಿಕ ವರ್ಷಕ್ಕೆ ಸೀಮಿತವಾಗಿ ನಿಯಮಾನುಸಾರ ಮಾಡಲಾಗುತ್ತಿದೆ.

**ಇಪಿ 218 ಎಸ್‌ಎಲ್‌ಬಿ 2024**

**(ಎಸ್. ಮಧು ಬಂಗಾರಪ್ಪ)**
**ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ**
**ಸಚಿವರು.**